# ಕರ್ನಾಟಕ ಸರ್ಕಾರ ನಡವಳಿಗಳು

**ವಿಷಯ**:- ವೀರಶೈವ ಲಿಂಗಾಯತ ಸಮುದಾಯ ಸೇವಾ ಸಂಸ್ಥೆ (ರಿ) ನವಲಗುಂದ ಧಾರವಾಡ ಜಿಲ್ಲೆ ಇವರ ವತಿಯಿಂದ ನಿರ್ಮಿಸುತ್ತಿರುವ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜುರು ಮಾಡುವ ಬಗ್ಗೆ.

**ಓದಲಾಗಿದೆ**:-
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2) ದಿ:05.11.2014.
2. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017.
3. ಆಯುಕ್ತರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಸ-7/ಸಿಆರ್-53 /2020-21, ದಿನಾಂಕ:13.01.2021.

***********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರದ ಆದೇಶದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ:2225-03-001-0-05ರಡಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.10.00 ಲಕ್ಷ ತಾಲ್ಲೂಕು ಕೇಂದ್ರಸ್ಥಾನ ರೂ.25.00 ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ರೂ.50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1,2ಎ,3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೊಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್ ಗಳಿಗೆ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ, ದಿ:05.11.2014ರ ಆದೇಶದಲ್ಲಿ ತಿಳಿಸಿರುವ ಅನುದಾನದ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿಯಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯಲ್ಲಿ ವೀರಶೈವ ಲಿಂಗಾಯತ ಸಮುದಾಯ ಸೇವಾ ಸಂಸ್ಥೆ (ರಿ) ನವಲಗುಂದ ಧಾರವಾಡ ಜಿಲ್ಲೆ, ಈ ಸಂಸ್ಥೆ ವತಿಯಿಂದ ನಿರ್ಮಿಸುತ್ತಿರುವ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರಾತಿ ಕೋರಿ ಸಮುದಾಯ ಭವನ ಕಟ್ಟಡದ ರೂ.406.41 ಲಕ್ಷಗಳ ಅಂದಾಜು ಪಟ್ಟಿ ಹಾಗೂ ಸಂಬಂಧಿಸಿದ ದಾಖಲಾತಿಗಳೊಂದಿಗೆ ಅನುದಾನ ಮಂಜೂರಾತಿ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ ಎಂಬುದಾಗಿ ತಿಳಿಸುತ್ತಾ, ಸದರಿ ಸಂಸ್ಥೆಯು ಪವರ್ಗ-3(ಬಿ) ಲಿಂಗಾಯಿತ ಸಮುದಾಯಕ್ಕೆ ಸೇರಿದ್ದು, ಸಂಸ್ಥೆಯವರು ಪುರಸಭೆ ವ್ಯಾಪ್ತಿಯಲ್ಲಿ ಸಮುದಾಯ ಭವನ ಕಟ್ಟಡ ನಿರ್ಮಾಣ ಮಾಡುತ್ತಿರುವುದರಿಂದ ನಿಯಮಾನುಸಾರ ರೂ.25.00 ಲಕ್ಷಗಳನ್ನು ಮಾತ್ರ ಮಂಜೂರು ಮಾಡಲು ಅವಕಾಶ ವಿರುತ್ತದೆ ಹಾಗೂ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಅನುದಾನದ ಕೊರತೆಯಿದ್ದು, ಸದರಿ ಸಮುದಾಯ ಭವನ ನಿರ್ಮಾಣಕ್ಕೆ ಸಹಾಯಧನ ಮಂಜೂರು ಮಾಡಲು ಅನುದಾನ ಲಭ್ಯವಿರುವುದಿಲ್ಲ ಎಂಬುದಾಗಿ ಅಭಿಪ್ರಾಯಿಸಿ, ವೀರಶೈವ ಲಿಂಗಾಯತ ಸಮುದಾಯ ಸೇವಾ ಸಂಸ್ಥೆ (ರಿ), ನವಲಗುಂದ ಧಾರವಾಡ ಜಿಲ್ಲೆ, ಈ ಸಂಸ್ಥೆಗೆ ರೂ.406.41 ಲಕ್ಷಗಳ ಅಂದಾಜು ಪಟ್ಟಿ ಹಾಗೂ ಸಂಬಂಧಿಸಿದ ದಾಖಲೆಗಳನ್ನು ಆಧಾರಿಸಿ ಸರ್ಕಾರದ ಮಾರ್ಗಸೂಚಿಗಳನ್ವಯ ಸಂಸ್ಥೆಗೆ ಅನುದಾನ ಮಂಜೂರು ಮಾಡುವ ಬಗ್ಗೆ ಸರ್ಕಾರದ ಹಂತದಲ್ಲಿ ತೀರ್ಮಾನಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

31/01/22

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 110 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ:31-01-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವೀರಶೈವ ಲಿಂಗಾಯತ ಸಮುದಾಯ ಸೇವಾ ಸಂಸ್ಥೆ (ರಿ) ನವಲಗುಂದ ಧಾರವಾಡ ಜಿಲ್ಲೆ, ಈ ಸಂಸ್ಥೆ ವತಿಯಿಂದ ನಿರ್ಮಿಸುತ್ತಿರುವ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ರೂ.50.00 (ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಲಕ್ಷ ಅನುದಾನವನ್ನು ಮಂಜೂರು ಮಾಡಲಾಗಿದ್ದು, ಈ ಪೈಕಿ ಮೊದಲನೇ ಕಂತಿನ ಅನುದಾನವನ್ನು ಸದರಿ ಸಂಸ್ಥೆಗೆ ಅರ್ಹತೆಯನುಸಾರ (ಲೆಕ್ಕಶೀರ್ಷಿಕೆ:2225-03-001-0-05 ರಡಿ ಪ್ರಸಕ್ತ ಸಾಲಿಗೆ ರೂ.20.00 ಕೋಟಿಗಳನ್ನು ಒದಗಿಸಿದ್ದು, ಈ ಅನುದಾನದಲ್ಲಿ ಈಗಾಗಲೇ ರೂ.20.00 ಕೋಟಿಗಳು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಬಿಡುಗಡೆ ಮಾಡಲಾಗಿದ್ದು, ಸದರಿ ಅನುದಾನದ 4ನೇ ತ್ರೈಮಾಸಿಕ ಕಂತಿನ ಅನುದಾನದಲ್ಲಿ) ಭರಿಸಲು ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

**ಷರತ್ತುಗಳು:-**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಹಾಲಿ ಉಲ್ಲೇಖದಲ್ಲಿ ಓದಲಾದ (1) ಮತ್ತು (2) ಮಾರ್ಗಸೂಚಿಗಳ ಷರತ್ತಿನಂತೆ ಅರ್ಹತೆ ಹೊಂದಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ಸಮುದಾಯ ಭವನದ ಕಟ್ಟಡವನ್ನು ನಿರ್ಮಿಸಲು ಸಂಸ್ಥೆಯ ಹೆಸರಿನಲ್ಲಿ ನಿವೇಶನ ಹೊಂದಿದೆಯೇ ಎಂಬುದರ ಬಗ್ಗೆ ಹಾಗೂ ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು ಅರ್ಹತೆ ಹೊಂದಿದಲ್ಲಿ ಮಾತ್ರ ಸದರಿ ಸಂಸ್ಥೆಗೆ ಯೋಜನೆಯ ಮಾರ್ಗಸೂಚಿಗಳಂತೆ ಸಂಬಂಧಪಟ್ಟ ಎಲ್ಲಾ ಅಗತ್ಯ ದಾಖಲಾತಿಗಳ ಪರಿಶೀಲನೆ ನಂತರ ಅರ್ಹತೆ ಅನುಸಾರ ಅನುದಾನವನ್ನು ಮಾರ್ಗಸೂಚಿಗಳಂತೆ ಹಂತ ಹಂತವಾಗಿ ಬಿಡುಗಡೆ ಮಾಡತಕ್ಕದ್ದು. ಸದರಿ ಸಂಸ್ಥೆ ಹಿಂದುಳಿದ ವರ್ಗಗಳ ಯಾವ ಪ್ರವರ್ಗದಡಿ ಬರುತ್ತದೆ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.
2. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಧಾರವಾಡ ಜಿಲ್ಲೆ ಇವರು ಹಣ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ ಇವರ ಮುಖಾಂತರ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರಿಗೆ ಸಲ್ಲಿಸತಕ್ಕದ್ದು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ನಿಯಮಾನುಸಾರ ಮಾರ್ಗಸೂಚಿಗಳಂತೆ ಸದ್ಬಳಕೆ ಮಾಡಿರುವ ಬಗ್ಗೆ ಅಗತ್ಯ ಪರಿಶೀಲನೆಯಲ್ಲಿ ಅವಶ್ಯಕ ಕ್ರಮತೆಗೆದುಕೊಳ್ಳುವುದು.
4. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಗಳಿಗೆ ನೀಡಲಾಗಿದೆಯೋ. ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು, ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.
5. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಧಾರವಾಡ ಜಿಲ್ಲೆ, ಇವರು ಹಣ ಬಿಡುಗಡೆ ಮುನ್ನ ಸದರಿ ಸಂಸ್ಥೆಯು ಸ್ವಂತ ನಿವೇಶನ ಹೊಂದಿದ್ದ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದಿತ ಕಟ್ಟಡದ ನಕ್ಷೆ ಮತ್ತು ಕಟ್ಟಡ ಕಟ್ಟುವ ಪರವಾನಗಿಯನ್ನು ಪಡೆದುಕೊಂಡ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು, ಬಾಕಿ ಮೊತ್ತವನ್ನು ಟ್ರಸ್ಟ್ ಭರಿಸುವ ಬಗ್ಗೆ ಮುಚ್ಚಳಿಕೆ ಪತ್ರ ಪಡೆಯತಕ್ಕದ್ದು.
6. ಅನುದಾನವನ್ನು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣಬಳಕೆ ಪ್ರಮಾಣ ಪತ್ರ ಸಲ್ಲಿಸಿದ ನಂತರ ಬಿಡುಗಡೆ ಮಾಡುವುದು.

31/1/22